ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**
ನೂರ ನಲವತ್ತೊಂದನೆಯ ಅಧಿವೇಶನ
ಶುಕ್ರವಾರ, ದಿನಾಂಕ: 25ನೇ ಸೆಪ್ಟಂಬರ್, 2020

ಕೊಡಗು ಜಿಲ್ಲೆಯಲ್ಲಿ ಪ್ರವಾಸೋದ್ಯಮ ಅಭಿವೃದ್ಧಿ ಕುರಿತು

ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು) :-

704 (688) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕರ್ನಾಟಕದ ಕಾಶ್ಮೀರವೆಂದೇ ಖ್ಯಾತಿ ಪಡೆದ ಕೊಡಗು ಜಿಲ್ಲೆಯಲ್ಲಿ ಪರಿಸರಸ್ನೇಹಿ ಹಾಗೂ ಸುಸ್ಥಿರ ಪ್ರವಾಸೋದ್ಯಮದ ಅಭಿವೃದ್ಧಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ಹಾಗೂ ರೂಪಿಸಿರುವ ಪ್ರವಾಸಿಸ್ನೇಹಿ ಯೋಜನೆಗಳೇನು ;

(ಆ) ಜಿಲ್ಲೆಯಲ್ಲಿ ಪರಿಸರಸ್ನೇಹಿ ಹಾಗೂ ಸುಸ್ಥಿರ ಪ್ರವಾಸೋದ್ಯಮದ ಅಭಿವೃದ್ಧಿಗಾಗಿ ಸರ್ಕಾರ ಕಳೆದ 3 ವರ್ಷಗಳಲ್ಲಿ ಎಷ್ಟು ಅನುದಾನವನ್ನು ಬಿಡುಗಡೆ ಮಾಡಿದೆ ; ಹಾಗೂ ಸದರಿ ಅನುದಾನದಲ್ಲಿ ಕೈಗೊಂಡಿರುವ ಕಾಮಗಾರಿಗಳು ವಿವರಗಳೇನು;

(ಇ) ಜಿಲ್ಲೆಯಲ್ಲಿ ಕಳೆದ 3 ವರ್ಷಗಳಲ್ಲಿ ಸಂಭವಿಸಿದ ಪ್ರವಾಹ ಹಾಗೂ ಭೂಕುಸಿತದ ಹಿನ್ನೆಲೆಯಲ್ಲಿ ಪರಿಸರಸ್ನೇಹಿ ಸುಸ್ಥಿರ ಹಾಗೂ ಪ್ರವಾಸಿಸ್ನೇಹಿ ಪ್ರವಾಸೋದ್ಯಮವನ್ನು ಉತ್ತೇಜಿಸಲು ಸರ್ಕಾರ ಕ್ರಮ ಕೈಗೊಂಡಿದೆಯೇ ? (ವಿವರಗಳನ್ನು ನೀಡುವುದು)